ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮೀಣ ಅಭಿವೃದ್ಧಿ, ವಸತಿ ಮತ್ತು ವಕ್ಫ್ ಮಂತ್ರಿಗಳು).—

೧. ಕೋಟೆಕಾರು ನಳದ ನೀರಿನ ಸರಬರಾಜು ಯೋಜನೆ:—

ಈ ಗ್ರಾಮಕ್ಕೆ ದಿನಾಂಕ ೩೦-೪-೧೯೮೫ರಲ್ಲಿ ೯.೦೫ ಲಕ್ಷ ರೂ.ಗಳಿಗೆ ರಾಷ್ಟ್ರೀಯ ನೀರು ಸರಬರಾಜು ಯೋಜನೆ ಮಂಜೂರಾಗಿದ್ದು, ಈ ಯೋಜನೆಯ ಜಲಮೂಲ ಇತ್ಯರ್ಥ ವಾಗಿದ್ದು, ಮೇಲ್ಮಟ್ಟದ ನೀರಿನ ತೊಟ್ಟಿ, ರೈಸಿಂಗ್ ಮೈನ್ ಮತ್ತು ಪಂಪು ಮನೆಯ ಕೆಲಸಗಳು ಪ್ರಗತಿಯಲ್ಲಿದೆ.

೨. ಉಳ್ಳಾಲ ಗ್ರಾಮದ ನೀರು ಸರಬರಾಜು ಯೋಜನೆ:—

ದಿನಾಂಕ ೨೫-೨-೧೯೮೫ರಲ್ಲಿ ಈ ಗ್ರಾಮಕ್ಕೆ ರಾಷ್ಟ್ರೀಯ ಗ್ರಾಮೀಣ ನೀರು ಸರಬರಾಜು ಯೋಜನೆಯಡಿಯಲ್ಲಿ ನೀರನ್ನು ಒದಗಿಸಲಾಗಿದೆ. ದಿನಾಂಕ ೯-೧೦-೮೬ರಲ್ಲಿ ಈ ಯೋಜನೆಯ ಅಭಿವೃದ್ಧಿಗೆ ೯.೫೫ ಲಕ್ಷ ರೂ.ಗಳು ಮಂಜೂರಾಗಿದ್ದು ಜಲಮೂಲ ಇತ್ಯಾದಿ ಕಾಮಗಾರಿಗಳು ಪ್ರಗತಿಯಲ್ಲಿವೆ.

೩) ೧೯೮೭ರ ಸೆಪ್ಟೆಂಬರ್ ಮಾಹೆಯೊಳಗೆ ಪೂರ್ಣಗೊಳಿಸಲಾಗುತ್ತೆ.

ಹರಿಜನ ಗಿರಿಜನರಿಗೆ ಮನೆ ನಿವೇಶನಗಳನ್ನು ನೀಡುವ ಬಗ್ಗೆ

೯೧ (೨೫೨) ಶ್ರೀ ಪಿ. ಸಿ. ಮುನಿಸ್ವಾಮಯ್ಯ (ದೇವನಹಳ್ಳಿ).—ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಕಳೆದ ಐದು ವರ್ಷಗಳಲ್ಲಿ ಸರಕಾರದವರು ಹರಿಜನ-ಗಿರಿಜನರಿಗೆ ಮನೆ ನಿವೇಶನ ಹಂಚಿದ್ದು ಕೆಲವು ಜಮೀನಿನ ಮಾಲೀಕರು ನ್ಯಾಯಾಲಯದಿಂದ ತಡೆಯಾಜ್ಞೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಸರಕಾರದವರು ಏನು ಕ್ರಮ ಕೈಗೊಂಡಿದ್ದಾರೆ?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮೀಣಾಭಿವೃದ್ಧಿ ಮತ್ತು ವಕ್ಫ್ ಸಚಿವರು).—

ಅ) ಬಂದಿದೆ.

ಆ) ನ್ಯಾಯಾಲಯದಲ್ಲಿ ದಾಖಲಾದ ಮನೆ ನಿವೇಶನ ಭೂಸ್ವಾಧೀನ ಪ್ರಕರಣಗಳ ಬಗ್ಗೆ ಸರ್ಕಾರದ ಪಾಟ್ಟಿದಲ್ಲಿ ಯಾವ ನಿರ್ಣಯವನ್ನು ತೆಗೆದುಕೊಳ್ಳಲು ಬರುವುದಿಲ್ಲ. ಈ ಸಂಬಂಧದಲ್ಲಿ ಸರ್ಕಾರಿ ವಕೀಲರನ್ನು ನೇಮಿಸಿ ದಾವೆಗಳನ್ನು ಪ್ರತಿ ವಾದಿಸಲು ನಿರ್ದೇಶಿಸಲಾಗುತ್ತಿದೆ.

ಸಿದ್ದಾಪುರ ಪುರಸಭೆಯ ಬಗ್ಗೆ

೯೨ (೨) ಶ್ರೀ ಗೋಪಾಲ ಮುಕುಂದ ಕಾನಡೇ (ಸಿರ್ಸಿ).—ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಸಿದ್ದಾಪುರ ಪುರಸಭೆಯಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿ ವರ್ಗದವರಿಗೆ ಹಲವಾರು ತಿಂಗಳುಗಳಿಂದ ಸಂಬಳ ಇಲ್ಲದೆ ತೊಂದರೆಯಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಆ ಬಗ್ಗೆ ಸರಕಾರದವರು ಕೈಗೊಂಡ ಕ್ರಮವೇನು?

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು, ಸಂಸದೀಯ ವ್ಯವಹಾರ, ಆಹಾರ ಮತ್ತು ನಾಗರೀಕ ಸರಬರಾಜು ನಗರಾಭಿವೃದ್ಧಿ ಸಚಿವರು).—

ಅ) ಹೌದು. ಗಮನಕ್ಕೆ ಬಂದಿದೆ.

ಆ) ಬಾಕಿ ಇದ್ದ ಸಂಬಳ ಜನವರಿ ತಿಂಗಳಲ್ಲಿ ಸಿಬ್ಬಂದಿಯವರಿಗೆ ಪಾವತಿ ಮಾಡಲ್ಪಟ್ಟಿರುತ್ತೆ.